## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 258 |
| ಸದಸ್ಯರ ಹೆಸರು | ಶ್ರೀ ಹೆಚ್.ಎಸ್. ಗೋಪಿನಾಥ್ |
| ಉತ್ತರಿಸಬೇಕಾದ ದಿನಾಂಕ | 16.07.2024 |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅಕ್ರಮ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು; | • ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ, ದಾಸ್ತಾನು, ಸಾಗಾಣಿಕೆಯನ್ನು ತಡೆಗಟ್ಟಲು ಆಯಾ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜಿಲ್ಲಾ ಮರಳು ಸಮಿತಿ ಹಾಗೂ ಉಪವಿಭಾಗಾಧಿಕಾರಿಗಳ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮರಳು ಸಮಿತಿಯನ್ನು ರಚಿಸಲಾಗಿರುತ್ತದೆ.<br>• ಮೇಲ್ಕಂಡ ಸಮಿತಿಯಲ್ಲಿ ಕಂದಾಯ, ಪೊಲೀಸ್, ಅರಣ್ಯ, ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ಗಣಿ ಮತ್ತು ಭೂವಿಜ್ಞಾನ ಹಾಗೂ ಪ್ರಾದೇಶಿಕ ಸಾರಿಗೆ ಇಲಾಖೆ ಅಧಿಕಾರಿಗಳು ಸದಸ್ಯರುಗಳಾಗಿರುತ್ತಾರೆ.<br>• ಸದರಿ ಇಲಾಖೆಗಳ ಅಧಿಕಾರಿಗಳಿಗೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಯಲು ಗಣಿ ಮತ್ತು ಖನಿಜ (ಅಭಿವೃದ್ಧಿ ಮತ್ತು ನಿಯಂತ್ರಣ) ಕಾಯ್ದೆ 1957ರ ಕಲಂ 4(1), 4(1-A) ಮತ್ತು ಕಲಂ 21 ಮತ್ತು 22 ರಡಿ ಹಾಗೂ ಕರ್ನಾಟಕ ಉಪ ಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 31-R(12) ರಡಿ ಸಂಬಂಧಪಟ್ಟ ಪೊಲೀಸ್ ಠಾಣೆಗಳಲ್ಲಿ ಹಾಗೂ ನ್ಯಾಯಾಲಯಗಳಲ್ಲಿ ಮೊಕದ್ದಮೆ ದಾಖಲಿಸಲು ಅಧಿಕಾರ ಪ್ರತ್ಯಾಯೋಜಿಸಲಾಗಿರುತ್ತದೆ.<br>• ಮುಂದುವರೆದು, ಕರ್ನಾಟಕ ಉಪಖನಿಜ ರಿಯಾಯಿತಿ ನಿಯಮಗಳು, 1994 ರ ನಿಯಮ 43-A ರಂತೆ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಿಗೆ ದಂಡ ವಿಧಿಸಿ, ವಸೂಲು ಮಾಡಲು ಅವಕಾಶ ಕಲ್ಪಿಸಲಾಗಿರುತ್ತದೆ.<br>• ಆಯಾ ಜಿಲ್ಲಾ ವ್ಯಾಪ್ತಿಯಲ್ಲಿ ಜಿಲ್ಲಾ ಹಾಗೂ ಮರಳು ಸಮಿತಿಯಿಂದ ಚಾಲಿತದಳ ತಂಡವನ್ನು ರಚಿಸಿಕೊಂಡು ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ವಹಿಸಲಾಗುತ್ತಿದೆ.<br>• ಮರಳು ಹಾಗೂ ಇತರೆ ಉಪಖನಿಜ ಸಾಗಾಣಿಕೆ ವಾಹನಗಳ ಚಲನವಲನಗಳ ಮೇಲೆ ನಿಗಾವಹಿಸಲು ಕೇಂದ್ರಿಕೃತ One state One GPS ವ್ಯವಸ್ಥೆಯನ್ನು ಜಾರಿಗೊಳಿಸಲಾಗಿರುತ್ತದೆ.<br>• ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು "ಖನಿಜ ಸಂರಕ್ಷಣಾ ಪಡೆ" ಯನ್ನು ಸ್ಥಾಪಿಸಲು ಕ್ರಮ ವಹಿಸಲಾಗುತ್ತಿದೆ. |

| | | |
|---|---|---|
| | | • ಮೇಲ್ಕಂಡಂತೆ, ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ನಡೆಸುತ್ತಿರುವವರ ವಿರುದ್ಧ ಕ್ರಮ ವಹಿಸಲಾಗಿದ್ದು, ಕಳೆದ ಸಾಲಿನಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಯಡಿ 4076 ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ₹1134.39 ಲಕ್ಷಗಳ ದಂಡ ಹಾಗೂ 1106 ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ.<br>• ಜಿಲ್ಲಾವಾರು ವಿವರಗಳನ್ನು **ಅನುಬಂಧ**ದಲ್ಲಿ ನೀಡಲಾಗಿದೆ. |
| ಆ) | ಅಕ್ರಮ ಮರಳು ದಂಧೆಯಿಂದ ರಾಜ್ಯದ ನದಿ ತೀರಗಳು ಹಾಗೂ ಅರಣ್ಯ ಪ್ರದೇಶ ಬರಡು ಭೂಮಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ನದಿ ಹಾಗೂ ಅರಣ್ಯ ರಕ್ಷಣೆಗೆ ಸರ್ಕಾರ ಕೈಗೊಂಡ ಕ್ರಮಗಳೇನು; | • ಅರಣ್ಯ ಪ್ರದೇಶಗಳ ವ್ಯಾಪ್ತಿಯಲ್ಲಿರುವ ನದಿ ಪಾತ್ರಗಳಲ್ಲಿ ಮರಳು ಗಣಿಗಾರಿಕೆಗೆ ಅವಕಾಶ ಕಲ್ಪಿಸಿರುವುದಿಲ್ಲ.<br>• ರಾಜ್ಯದಲ್ಲಿ ನದಿ ಪಾತ್ರದಲ್ಲಿ ಮರಳು ಬ್ಲಾಕ್ ಗಳನ್ನು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ಗುರುತಿಸಿ ಸದರಿ ಗುತ್ತಿಗೆ / ಕಾರ್ಯಾದೇಶವನ್ನು ಮಂಜೂರು ಮಾಡುವ ಪೂರ್ವದಲ್ಲಿ ನಿಯಮಾನುಸಾರ ಪರಿಸರ ಅನುಮತಿ ಪತ್ರ ಪಡೆದು ಗುತ್ತಿಗೆಗಳ ಕಾರ್ಯದೇಶವನ್ನು ಮಂಜೂರು ಮಾಡಲಾಗುತ್ತಿದೆ.<br>• ರಾಜ್ಯದಲ್ಲಿ ಅಕ್ರಮ ಗಣಿಗಾರಿಕೆಯಿಂದ ನದಿಪಾತ್ರಗಳು ಬರಡಾಗುತ್ತಿರುವ ಬಗ್ಗೆ ಯಾವುದೇ ವರದಿಗಳಿರುವುದಿಲ್ಲ. ಮುಂದುವರೆದು, ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ತಡೆಗಟ್ಟಲು ಆಯಾ ಜಿಲ್ಲಾ ಮರಳು ಸಮಿತಿಗಳಿಂದ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು, ಕಳೆದ ಸಾಲಿನಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಯಡಿ 4076 ಪ್ರಕರಣಗಳನ್ನು ಪತ್ತೆ ಹಚ್ಚಿದ್ದು, ₹1134.39 ಲಕ್ಷಗಳ ದಂಡ ಹಾಗೂ 1106 ಮೊಕದ್ದಮೆಗಳನ್ನು ದಾಖಲಿಸಲಾಗಿರುತ್ತದೆ. |
| ಇ) | ಅಕ್ರಮ ಮರಳು ದಂಧೆಯಿಂದ ರಾಜ್ಯ ಸರ್ಕಾರಕ್ಕೆ ದೊಡ್ಡ ಮೊತ್ತದ ಆದಾಯ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಕುರಿತು ಸರ್ಕಾರದ ನಿಲುವೇ? | ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಿಂದ ಬೊಕ್ಕಸಕ್ಕೆ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br>ಉಪ ಪ್ರಶ್ನೆ (ಆ) ರಲ್ಲಿ ತಿಳಿಸಿರುವಂತೆ, ರಾಜ್ಯದಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಆಯಾ ಜಿಲ್ಲಾ ಮರಳು ಸಮಿತಿಗಳಿಂದ ನಿಯಮಾನುಸಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲು ಕ್ರಮವಹಿಸಲಾಗಿರುತ್ತದೆ. |

ಸಂಖ್ಯೆ ಸಿಐ-ಎಂಎಂಎನ್/156/2024

**(ಎಸ್.ಎಸ್.ಮಲ್ಲಿಕಾರ್ಜುನ)**
ಗಣಿ ಮತ್ತು ಭೂವಿಜ್ಞಾನ ಹಾಗೂ
ತೋಟಗಾರಿಕೆ ಸಚಿವರು.

ಎಸ್.ಎಸ್. ಮಲ್ಲಿಕಾರ್ಜುನ್
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು
ಹಾಗೂ ದಾವಣಗೆರೆ ಜಿಲ್ಲೆ ಉಸ್ತುವಾರಿ ಸಚಿವರು

ಅನುಬಂಧ - 01

**2023-24ನೇ ಸಾಲಿನ ಜಿಲ್ಲಾ ಮರಳು ಸಮಿತಿಯ ವಿವಿಧ ಇಲಾಖೆಗಳಿಂದ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳಡಿ ಸಂಗ್ರಹಿಸಲಾಗಿರುವ ದಂಡದ ಮೊತ್ತ ಮತ್ತು ಮೊಕದ್ದಮೆ ದಾಖಲಿಸಿರುವ ವಿವರಗಳು**

| ಕ್ರ. ಸಂ. | ಜಿಲ್ಲೆ | ಪತ್ತೆ ಹಚ್ಚಿದ ಪ್ರಕರಣಗಳ ಸಂಖ್ಯೆ | ವಿಧಿಸಿರುವ ದಂಡ (ರೂ.ಲಕ್ಷಗಳಲ್ಲಿ) | ದಾಖಲಿಸಿದ ಮೊಕದ್ದಮೆಗಳ ಸಂಖ್ಯೆ FIR / CC |
|---|---|---|---|---|
| 1 | 2 | 3 | 4 | 5 |
| 1 | ಬೆಂಗಳೂರು ಗ್ರಾಮಾಂತರ | 0 | 0 | 0 |
| 2 | ಬೆಂಗಳೂರು ನಗರ | 1 | 0.46 | 0 |
| 3 | ತುಮಕೂರು | 26 | 3.92 | 12 |
| 4 | ಕೋಲಾರ | 18 | 4.87 | 0 |
| 5 | ಚಿಕ್ಕಬಳ್ಳಾಪುರ | 44 | 12.69 | 16 |
| 6 | ರಾಮನಗರ | 28 | 10.94 | 11 |
| 7 | ದಾವಣಗೆರೆ | 152 | 33.53 | 6 |
| 8 | ಚಿತ್ರದುರ್ಗ | 88 | 22.23 | 22 |
| 9 | ಶಿವಮೊಗ್ಗ | 310 | 104.71 | 3 |
| 10 | ಮೈಸೂರು | 35 | 2.62 | 21 |
| 11 | ಮಂಡ್ಯ | 29 | 2.9 | 17 |
| 12 | ಚಾಮರಾಜನಗರ | 15 | 3.58 | 0 |
| 13 | ಹಾಸನ | 76 | 17.31 | 40 |
| 14 | ದಕ್ಷಿಣ ಕನ್ನಡ | 296 | 179.72 | 33 |
| 15 | ಉಡುಪಿ | 204 | 46.4 | 3 |
| 16 | ಕೊಡಗು | 37 | 7.41 | 4 |
| 17 | ಚಿಕ್ಕಮಗಳೂರು | 55 | 5.47 | 32 |
| 18 | ಕಲಬುರಗಿ | 199 | 81.23 | 39 |
| 19 | ರಾಯಚೂರು | 568 | 56.82 | 403 |
| 20 | ಬೀದರ್ | 51 | 17.87 | 1 |
| 21 | ಬಳ್ಳಾರಿ | 61 | 10.39 | 0 |
| 22 | ಹೊಸಪೇಟೆ | 173 | 24.97 | 114 |
| 23 | ಯಾದಗಿರಿ | 163 | 18.83 | 113 |
| 24 | ಕೊಪ್ಪಳ | 431 | 121.71 | 99 |
| 25 | ಬೆಳಗಾಂ | 98 | 19.37 | 32 |
| 26 | ವಿಜಯಪುರ | 83 | 32.14 | 27 |
| 27 | ಧಾರವಾಡ | 47 | 16.8 | 0 |
| 28 | ಗದಗ | 243 | 119.49 | 37 |
| 29 | ಹಾವೇರಿ | 191 | 58.88 | 6 |
| 30 | ಬಾಗಲಕೋಟೆ | 229 | 49.68 | 11 |
| 31 | ಉತ್ತರ ಕನ್ನಡ | 125 | 47.45 | 4 |
| ಒಟ್ಟು | | 4076 | 1134.39 | 1106 |

CI-156-MMN-2024

Deputy Director (Min. Admn)
Dept. of Mines & Geology